ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಉಪನಿರ್ದೇಶಕರ ಕಚೇರಿ, ವಾರ್ತಾಭವನ, ಧನ್ವಂತರಿ ರಸ್ತೆ, ಮೈಸೂರು-570001, ದೂರವಾಣಿ:0821-2423251, ಫ್ಯಾಕ್ಸ್0821-2423251 ಇ-ಮೇಲ್: mysorevarthabhavan@gmail.com
ಗ್ರೂಪ್ ವೆಬ್‌ಸೈಟ್: http://groups.google.com/group/mysorevarthabhavan

**29ನೇ ಡಿಸೆಂಬರ್ 2016**

# ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಆದ್ಯತೆ: ಸಿ.ಎಂ



ಮೈಸೂರು.ಡಿ.29. - ರಾಜ್ಯ ಸರ್ಕಾರ ಸಾಧ್ಯವಿರುವ ಎಲ್ಲ ಭಾಗಗಳಲ್ಲಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಅನುಷ್ಠಾನ ಮಾಡಲು ಮುಂದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ನಂಜನಗೂಡು ಪಟ್ಟಣದ ಶ್ರೀಕಂಠೇಶ್ವರ ದೇವಸ್ಥಾನದ ಬಳಿ ಇಂದು ಪಟ್ಟಣದ ವಿವಿಧ ಅಭಿವೃದ್ಧಿ ಕಾಮಗಾರಿ ಶಂಕುಸ್ಥಾಪನೆ ಹಾಗೂ ಉದ್ಘಾಟನೆಯನ್ನು ನೆರವೇರಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಮಳೆ ಪ್ರಮಾಣ ಕಡಿಮೆಯಾಗುತ್ತಿದೆ. ಇದರಿಂದ ಕೆರೆಗಳು ಬತ್ತಿ ಹೋಗುತ್ತಿದ್ದು ಅಂತರ್ಜಲ ಮಟ್ಟವು ಕ್ಷೀಣಿಸಿದೆ. ಇದರಿಂದ ಕೊಳವೆ ಬಾವಿಗಳಲ್ಲಿ ಅತ್ಯಂತ ಆಳದಲ್ಲಿ ನೀರು ಲಭಿಸಿದರೂ ಸಹ ಇದರಲ್ಲಿ ಪ್ಲೋರೈಡ್, ನೈಟ್ರೇಟ್ ಪ್ರಮಾಣ ಹೆಚ್ಚಾಗಿದ್ದು, ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಹೀಗಾಗಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಮೈಸೂರು, ಚಾಮರಾಜನಗರ ಜಿಲ್ಲೆಯಲ್ಲಿ ಮಾತ್ರವಲ್ಲದೆ

ಸಾಧ್ಯವಿರುವ ರಾಜ್ಯದ ಎಲ್ಲ ಕಡೆ ಹಮ್ಮಿಕೊಳ್ಳಲು ನೀರಾವರಿಗೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿಯವರು ತಿಳಿಸಿದರು.

ಸರ್ಕಾರ ಸೂಕ್ಷ್ಮ ನೀರಾವರಿ ಸೌಲಭ್ಯ ಕಲ್ಪಿಸಲು ಒತ್ತು ನೀಡಿದೆ. ರಾಜ್ಯದಲ್ಲಿ ಶೇ. 70 ರಷ್ಟು ಮಳೆಯಾಶ್ರಿತ ಭೂಮಿ ಇದೆ. ರಾಜಸ್ಥಾನ ರಾಜ್ಯ ಹೊರತುಪಡಿಸಿದರೆ. ಕರ್ನಾಟಕವು ಒಣ ಭೂಮಿಯನ್ನು ಹೆಚ್ಚು ಪ್ರಮಾಣದಲ್ಲಿ ಹೊಂದಿದೆ. ಈ ಹಿನ್ನೆಲೆಯಲ್ಲಿ ನೀರಾವರಿ ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ಸೂಕ್ಷ್ಮ ನೀರಾವರಿ ಸೌಲಭ್ಯ ಅಳವಡಿಸಿಕೊಳ್ಳಲು ಮುಂದೆ ಬರುವವರಿಗೆ ಶೇ. 90 ರಷ್ಟು ಸಹಾಯ ಧನ ನೀಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ 139 ತಾಲ್ಲೂಕುಗಳು ಬರಪೀಡಿತವೆಂದು ಘೋಷಿಸಲಾಗಿದ್ದು, ಇಂತಹ ಪ್ರದೇಶದಲ್ಲಿ ಕುಡಿಯುವ ನೀರು ಜಾನುವಾರುಗಳಿಗೆ ಮೇವು ಸೇರಿದಂತೆ ಅಗತ್ಯ ಮೂಲ ಸೌಕರ್ಯವನ್ನು ಸಮರ್ಪಕವಾಗಿ ಒದಗಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಕುಡಿಯುವ ನೀರು ಪೂರೈಕೆ, ಮೇವು, ಉದ್ಯೋಗ, ಆರೋಗ್ಯ ಸೌಲಭ್ಯಕ್ಕೆ ಎಷ್ಟು ಹಣ ವೆಚ್ಚವಾದರೂ ಅಗತ್ಯವಿರುವ ಅನುದಾನವನ್ನು ನೀಡಲು ಸರ್ಕಾರ ಸಿದ್ಧವಿದೆ. ಮೈಸೂರು ಜಿಲ್ಲೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಖಾತೆಯಲ್ಲಿ ಬರಪರಿಹಾರ ಕಾಮಗಾರಿಗಾಗಿ 10 ಕೋಟಿ ರೂ. ಹಣ ಲಭ್ಯವಿದೆ ಎಂದು ಮುಖ್ಯಮಂತ್ರಿಯವರು ತಿಳಿಸಿದರು.

ನಂಜನಗೂಡು ತಾಲ್ಲೂಕು ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಹೆಚ್ಚು ಅನುದಾನವನ್ನು ನೀಡುತ್ತಿದೆ. ಪಟ್ಟಣದ ಶ್ರೀಕಂಠೇಶ್ವರ ದೇವಾಲಯಕ್ಕೆ ಪೂರಕವಾದ ಕಾಮಗಾರಿಯನ್ನು ಅನುಷ್ಠಾನ ಮಾಡಲಾಗುತ್ತಿದೆ. ಪಟ್ಟಣದ ಪ್ರಗತಿಪರ ಕಾಮಗಾರಿಗಾಗಿ 60 ಕೋಟಿ ರೂ. ಅನುದಾನವನ್ನು ನೀಡಲಾಗಿದೆ ಎಂದು ಮುಖ್ಯಮಂತ್ರಿಯವರು ತಿಳಿಸಿದರು.

ರಾಜ್ಯ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ರಾಜ್ಯದಲ್ಲಿ ಕೃಷಿಭಾಗ್ಯ ಯೋಜನೆಯನ್ನು 1 ಲಕ್ಷ ರೈತರಿಗೆ ಕಲ್ಪಿಸಿದೆ. ಕೃಷಿ ಸಾಲ ಸೇರಿದಂತೆ ಅಗತ್ಯವಿರುವ ನೆರವುವನ್ನು ಒದಗಿಸುತ್ತಿದೆ. ಸಮಾಜದಲ್ಲಿ ಎಲ್ಲ ಜಾತಿ, ಧರ್ಮ, ಸಮುದಾಯ ಜನತೆ, ಸಾಮರಸ್ಯದಿಂದ ಬದುಕು ಸಾಗಿಸಬೇಕು ಎಂಬುದು ನಮ್ಮ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿಯವರು ನುಡಿದರು.

ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಸಿ. ಮಹದೇವಪ್ಪ ಅವರು ಮಾತನಾಡಿ ನಂಜನಗೂಡು ಪಟ್ಟಣಕ್ಕೆ ನಗರೋತ್ಥಾನದಡಿ 25 ಕೋಟಿ ರೂ. ಹಾಗೂ ಪರಿಶಿಷ್ಟ ಜಾತಿ ವರ್ಗ ವಿಶೇಷ ಘಟಕ ಯೋಜನೆಯಡಿ 4.5 ಕೋಟಿ ರೂ. ಹಣ ಮಂಜೂರಾಗಿದೆ. ದೇವಾಲಯದಿಂದ ರಥ ಸಂಚರಿಸುವ ಮಾರ್ಗಗಳ ದುರಸ್ಥಿ ಒಳಚರಂಡಿ ಸೇರಿದಂತೆ ಇನ್ನಿತರ ಕಾಮಗಾರಿಗೆ 10 ಕೋಟಿ ರೂ. ಮಂಜೂರು ಮಾಡಲಾಗಿದೆ. ಅಲ್ಲದೆ ಪಟ್ಟಣದ ಇತರೆ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಹಣಕಾಸು ಮಂಜೂರಾತಿ ನೀಡಲಾಗಿದೆ. ಈ ಎಲ್ಲ ಅನುದಾನದ ನೆರವಿನಿಂದ ಇತಿಹಾಸ ಪ್ರಸಿದ್ದ ನಂಜನಗೂಡು ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲಾಗುವುದು ಎಂದು ತಿಳಿಸಿದರು.

ಸಹಕಾರ ಸಚಿವರಾದ ಎಚ್.ಎಸ್. ಮಹದೇವಪ್ರಸಾದ್ ಅವರು ಮಾತನಾಡಿ ಪುಣ್ಯಕ್ಷೇತ್ರ ನಂಜನಗೂಡು ದಕ್ಷಿಣಭಾರತದಲ್ಲಿ ಹೆಸರುವಾಸಿಯಾಗಿದ್ದು ಎಲ್ಲೆಡೆಯಿಂದ ಬಹುಸಂಖ್ಯೆಯಲ್ಲಿ ಯಾತ್ರಿಕರು ಭೇಟಿ ನೀಡುತ್ತಿದ್ದಾರೆ. ಇಲ್ಲಿನ ಅಭಿವೃದ್ಧಿಗೆ ಸಾಕಷ್ಟು ಅನುದಾನ ಬಿಡುಗಡೆಯಾಗಿದ್ದು, ಕಾಮಗಾರಿಗೆ ಚಾಲನೆ ನೀಡಲಾಗಿದೆ. ಈ ಮೂಲಕ ಅಭಿವೃದ್ಧಿಯ ಪರ್ವ ಆರಂಭವಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಲೋಕಸಭಾ ಸದಸ್ಯರಾದ ಆರ್. ಧ್ರುವನಾರಾಯಣ ಅವರು ರಾಜ್ಯದಲ್ಲಿ ಮುಖ್ಯಮಂತ್ರಿಯವರ ನೇತೃತ್ವದಲ್ಲಿ ನಾಡಿನ ಎಲ್ಲ ಕ್ಷೇತ್ರಗಳಲ್ಲಿ ಅಭಿವೃದ್ಧಿಯ ಶಕೆ ಆರಂಭವಾಗಿದೆ. ಈ ಹಿಂದೆ 9ನೇ ಸ್ಥಾನದಲ್ಲಿದ್ದ ಕರ್ನಾಟಕ ರಾಜ್ಯವು ಪ್ರಗತಿಯಲ್ಲಿ ಪ್ರಸ್ತುತ 3ನೇ ಸ್ಥಾನದಲ್ಲಿ ಇದೆ. ದಕ್ಷಿಣಕಾಶಿ ಎಂದೆ ಪ್ರಸಿದ್ಧವಾಗಿರುವ ನಂಜನಗೂಡು ಪಟ್ಟಣವನ್ನು ಮಾದರಿಯನ್ನಾಗಿಸಲು ಸರ್ಕಾರ ನೀಡಿರುವ ಅನುದಾನ ಸದ್ಬಳಕೆಯಾಗಲು ಎಲ್ಲರೂ ಶ್ರಮಿಸಬೇಕಿದೆ ಎಂದರು.

ಇದೇ ಸಂದರ್ಭದಲ್ಲಿ ಉತ್ತಮವಾಗಿ ಸೇವೆ ಸಲ್ಲಿಸಿದ ಪೌರಕಾರ್ಮಿಕರನ್ನು ಸನ್ಮಾನಿಸಲಾಯಿತು. ಗೃಹಭಾಗ್ಯ ಯೋಜನೆಯಡಿ ಆಯ್ಕೆಯಾಗಿರುವ ಪೌರಕಾರ್ಮಿಕರಿಗೆ ಸಹಾಯಧನದ ಚೆಕ್‌ಗಳನ್ನು ವಿತರಿಸಲಾಯಿತು, ಅಂಗವಿಕಲರಿಗೆ ಸಹಾಯಧನ, ಬೆಳಗಿನ ಉಪಹಾರ ನೆರವು ಧನವನ್ನು ನೀಡಲಾಯಿತು.

ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವ ತನ್ವೀರ್ ಸೇಠ್, ವಿಧಾನ ಪರಿಷತ್ ಸದಸ್ಯರಾದ ಆರ್. ಧರ್ಮಸೇನ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಧ್ರುವಕುಮಾರ್, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಸಿದ್ದರಾಜು, ಮೈಸೂರು ಬಣ್ಣ ಮತ್ತು ಅರಗು

ಕಾರ್ಖಾನೆ ಅಧ್ಯಕ್ಷ ಹೆಚ್.ಎ. ವೆಂಕಟೇಶ್, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಮಲ್ಲಿಗೆ ವೀರೇಶ್, ನಗರಸಭೆ ಅಧ್ಯಕ್ಷರಾದ ಪಿ. ಪುಷ್ಪಲತ ಕಮಲೇಶ್, ಉಪಾಧ್ಯಕ್ಷರಾದ ಎಂ. ಪ್ರದೀಪ್, ತಾಲ್ಲೂಕು ಪಂಚಾಯತ್ ಉಪಾಧ್ಯಕ್ಷರಾದ ಆರ್. ಗೋವಿಂದರಾಜು, ಜಿಲ್ಲಾಧಿಕಾರಿ ರಂದೀಪ್ ಡಿ. ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

-----------------